**ಸಾಕ್ಷಿಗೆ ದಿನಾಂಕಃ 28.10.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.BSB ರವರಿಂದಃ**

1) ನಾನು ಈ ಪ್ರಕರಣದಲ್ಲಿ ಸಾಕ್ಷಿದಾರನಾಗಿದ್ದೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) ನ್ಯಾಯಾಲಯವು ಕಳುಹಿಸಿದ್ದ ಸಮನ್ಸ್ ನಲ್ಲಿ ನಮೂದು ಮಾಡಿದ್ದಂತಹ ದಾಖಲೆಗಳನ್ನು ನಾನು ಈ ದಿನ ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದೇನೆ.

3) ಅನುಮತಿ ಪತ್ರವನ್ನು **ನಿ.ಪಿ.14** ಎಂದು ಗುರುತಿಸಿದೆ.

4) ಬೆಂಗಳೂರಿನ **Srinivas** ಆಸ್ಪತ್ರೆಯಲ್ಲಿ ಇಟ್ಟಿರುವಂತಹ **Medico Legal Case Register** ರ ಮೂಲ ರಿಜಿಸ್ಟರ್ ಅನ್ನು ಮತ್ತು ಇದೇ ದಾಖಲೆಯಲ್ಲಿ ದಿಃ **27.09.2024** ರಂದು ಇರುವ ಹಾಳೆಯ

ಧೃಢೀಕೃತ ನಕಲನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಯನ್ನು ಮತ್ತು ಫೋಟೋ ಪ್ರತಿಯನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಯನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಯನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಯನ್ನು ನಿ.ಪಿ.**15** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಯನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

5) ಓರ್ವ ತರುಣ್ ಗೌಡ ಎಂಬ ವ್ಯಕ್ತಿಯು ನಮ್ಮ ಆಸ್ಪತ್ರೆಗೆ ಯಾವಾಗ ದಾಖಲು ಆಗಿದ್ದಾರೆ ಮತ್ತು ಅವರಿಗೆ ಯಾವ ರೀತಿಯ ಗಾಯಗಳು ಆಗಿದ್ದವು ಮತ್ತು ಆತನಿಗೆ ಯಾವ ರೀತಿಯ ಚಿಕಿತ್ಸೆಯನ್ನು ಕೊಡಲಾಗಿದೆ ಎಂಬ ಎಲ್ಲಾ ಮಾಹಿತಿಗಳನ್ನು ಒಳಗೊಂಡಿರುವಂತಹ ಒಂದು ಫೈಲ್ ಹಾಜರುಪಡಿಸಿದ್ದು ಅದನ್ನು ನಿ.ಪಿ.**16** ಎಂದು ಗುರುತಿಸಿದೆ.

6) **5 X-ray** ಫಿಲಂಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**17** ಎಂದು ಗುರುತಿಸಿದೆ.

**<u>ಪಾಟೀ ಸವಾಲು: 1 ನೇ ಎದುರುದಾರರ ಪರ ಶ್ರೀ.ಕೆ.ಪಿ. ವಕೀಲರಿಂದಃ</u>**

1) ನಿ.ಪಿ.**15** ರಲ್ಲಿ ಇರುವ ವಿವರಗಳನ್ನು ಕಾರ್ಯ ನಿರತ ವೈದ್ಯರು ನಮೂದು ಮಾಡಿದ್ದಾರೆ. ತರುಣ್ ಗೌಡ ಎನ್ನುವವರಿಗೆ ಚಿಕಿತ್ಸೆಯನ್ನು ನೀಡಿರುವಂತಹ ಡಾ.ಅರುಣ್ ರವರು ಇವತ್ತಿಗೂ ಸಹಾ ನಮ್ಮ ಆಸ್ಪತ್ರೆಯಲ್ಲಿಯೇ ಕೆಲಸ

ಮಾಡುತ್ತಿದ್ದಾರೆ ಎಂದರೆ ಸರಿ.

**<u>ಪಾಟೀ ಸವಾಲು: 2 ನೇ ಎದುರುದಾರರ ಪರವಾಗಿಃ</u>**

2 ನೇ ಎದುರುದಾರರು ಏಕ ಪಕ್ಷೀಯವಾಗಿದ್ದಾರೆ. ಆದ ಕಾರಣದಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರು ವಿಚಾರಣೆಃ ಇಲ್ಲ.</u>**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.